**Bangalore**
**Regional News**
**24.04.2026 / 2.30 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**ಮುಖ್ಯಾಂಶಗಳು**

1. ಬೆಂಗಳೂರನ್ನು ಕೃಷಿ ತಂತ್ರಜ್ಞಾನ ರಾಜಧಾನಿಯನ್ನಾಗಿ ಮಾಡುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಕರೆ
2. ನವದೆಹಲಿಯಲ್ಲಿ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಭೇಟಿ ಮಾಡಿದ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ; ಬೆಂಗಳೂರಿನ ರಕ್ಷಣಾ ವಿಮಾನ ನಿಲ್ದಾಣಗಳ ನಿರ್ಬಂಧ ಕುರಿತಂತೆ ಚರ್ಚೆ
3. ಸಚಿವ ಡಿ.ಸುಧಾಕರ್ ಆರೋಗ್ಯ ಸ್ಥಿರ ; ಕಿಮ್ಸ್ ಆಸ್ಪತ್ರೆ ವೈದ್ಯಕೀಯ ನಿರ್ದೇಶಕ ಡಾ.ಚಿನ್ನದುರೈ ಸ್ಪಷ್ಟನೆ
4. ಇಂದು ಡಾ.ರಾಜ್‌ಕುಮಾರ್ ೯೭ನೇ ಜನ್ಮ ದಿನಾಚರಣೆ -ರಾಜ್ಯದೆಲ್ಲೆಡೆ ವರನಟನ ಸ್ಮರಣೆ
5. ಐಪಿಎಲ್ ಕ್ರಿಕೆಟ್ ; ಬೆಂಗಳೂರಿನಲ್ಲಿ ಇಂದು ರಾಯಲ್ ಚಾಲೆಂಜರ್ಸ್ ಬೆಂಗಳೂರು-ಗುಜರಾತ್ ಟೈಟಾನ್ಸ್ ಮುಖಾಮುಖಿ - ಬಿಗಿ ಭದ್ರತೆ

<><><><>

ಕೃಷಿ ಕ್ಷೇತ್ರ ಲಾಭದಾಯಕವಾದಾಗ ಮಾತ್ರ ಯುವಜನತೆ ಕೃಷಿಯತ್ತ ಆಕರ್ಷಿತರಾಗಲು ಸಾಧ್ಯ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅಭಿಪ್ರಾಯಪಟ್ಟಿದ್ದಾರೆ. ಕರ್ನಾಟಕ, ವಾಣಿಜ್ಯ ಮತ್ತು ಕೈಗಾರಿಕಾ ಮಹಾ ಸಂಸ್ಥೆ ಅರಮನೆ ಮೈದಾನದಲ್ಲಿ ಆಯೋಜಿಸಿದ್ದ ಗ್ಲೋಬಲ್ ಅಗ್ರಿಟೆಕ್ ಸಮ್ಮಿಟ್ - ೨೦೨೬ ಉದ್ಘಾಟಿಸಿ ಮಾತನಾಡಿದ ಅವರು, ಮಾಹಿತಿ ತಂತ್ರಜ್ಞಾನದಲ್ಲಿ ರಾಜ್ಯ ಅಗ್ರಸ್ಥಾನದಲ್ಲಿದ್ದು, ಕೃಷಿ ತಂತ್ರಜ್ಞಾನದಲ್ಲಿಯೂ ಬೆಂಗಳೂರು ರಾಜಧಾನಿಯಾಗಬೇಕು ಎಂದು ಕರೆ ನೀಡಿದ್ದಾರೆ.

ಧ್ವನಿ : ಮುಖ್ಯಮಂತ್ರಿ ಸಿದ್ದರಾಮಯ್ಯ (೪೨ ಸೆಕೆಂಡ್‌ಗಳು)

ರಾಜ್ಯದಲ್ಲಿರುವ ಒಣಭೂಮಿಯನ್ನು ಕೃಷಿ ಭೂಮಿಯನ್ನಾಗಿ ಪರಿವರ್ತಿಸಲು ಅಧಿಕಾರಿಗಳು ಸಹಕರಿಸುವಂತೆ ತಿಳಿಸಿದ್ದಾರೆ. ಸಣ್ಣ ಹಿಡುವಳಿದಾರರಿಗಾಗಿಯೇ ರಾಜ್ಯ ಸರ್ಕಾರ ಕೃಷಿ ಭಾಗ್ಯ ಯೋಜನೆಯನ್ನು ಜಾರಿಗೆ ತಂದಿದ್ದು, ರೈತರು ಸದುಪಯೋಗ ಪಡಿಸಿಕೊಳ್ಳುವಂತೆ ಹೇಳಿದ್ದಾರೆ. ಕಾರ್ಯಕ್ರಮದಲ್ಲಿ ಕೃಷಿ ಸಚಿವ ಚಲುವರಾಯಸ್ವಾಮಿ, ಎಫ್‌ಕೆಸಿಸಿಐ ಅಧ್ಯಕ್ಷರು ಹಾಗೂ ಕೃಷಿ ಇಲಾಖೆಯ ಅಧಿಕಾರಿಗಳು ಪಾಲ್ಗೊಂಡಿದ್ದರು.

<><><><>

ನವದೆಹಲಿಯಲ್ಲಿ ಇಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರನ್ನು ಭೇಟಿಯಾಗಿ ಮಹತ್ವದ ವಿಷಯಗಳ ಕುರಿತಂತೆ ಚರ್ಚೆ ನಡೆಸಿದ್ದಾರೆ. ಬೆಂಗಳೂರಿನ ರಕ್ಷಣಾ ವಿಮಾನ ನಿಲ್ದಾಣಗಳ ಸುತ್ತಲೂ ವಿಧಿಸಲಾಗುತ್ತಿರುವ ಎತ್ತರಗಳ ನಿರ್ಬಂಧಗಳ ಬಗ್ಗೆ ಸಮಾಲೋಚನೆ ನಡೆಸಿದ್ದಾರೆ. ನಗರದ ಹಲವಾರು ಭಾಗಗಳಲ್ಲಿ ಈ ನಿರ್ಬಂಧದಿಂದಾಗಿ ಅಭಿವೃದ್ಧಿಗೆ ಹಿನ್ನಡೆಯಾಗುತ್ತಿದೆ ಎಂದು ಅವರು ಕಳವಳ ವ್ಯಕ್ತಪಡಿಸಿದ್ದಾರೆ. ಬೆಂಗಳೂರಿನ ಅಭಿವೃದ್ಧಿಯ ದೃಷ್ಟಿಯಿಂದ ವಾಯುಯಾನ ಸುರಕ್ಷತೆಯನ್ನು ಖಾತರಿಪಡಿಸುವ ಸಮತೋಲಿತ ವಿಧಾನವನ್ನು ಪರಿಗಣಿಸುವಂತೆ ರಕ್ಷಣಾ ಸಚಿವರನ್ನು ಒತ್ತಾಯಿಸಿದ್ದಾರೆ.

<><><><>

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅಧ್ಯಕ್ಷತೆಯಲ್ಲಿ ಇಂದು ಮಧ್ಯಾಹ್ನ ವಿಶೇಷ ಸಚಿವ ಸಂಪುಟ ಸಭೆ ನಡೆಯಲಿದೆ. ಇಂದಿನ ಸಭೆಯಲ್ಲಿ ಪ್ರಮುಖವಾಗಿ ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ನೇತೃತ್ವದಲ್ಲಿ ರಚಿಸಲಾಗಿದ್ದ ತಾಂತ್ರಿಕ ಸಮಿತಿಯ ಸಲಹೆಯಂತೆ ಪರಿಶಿಷ್ಟ ಜಾತಿಯ ಒಳ ಮೀಸಲು ಕಲ್ಪಿಸುವ ಸಂಬಂಧ ಮಹತ್ವದ ತೀರ್ಮಾನ ತೆಗೆದುಕೊಳ್ಳುವ ಸಾಧ್ಯತೆಯಿದೆ. ಪರಿಶಿಷ್ಟ ಜಾತಿ ಪಟ್ಟಿಯಲ್ಲಿರುವ ೧೦೧ ಜಾತಿಗಳ ಪೈಕಿ ಅವಕಾಶ ವಂಚಿತ ಉಪಜಾತಿಗಳಿಗೆ ಒಳಮೀಸಲು ಕಲ್ಪಿಸಬೇಕೆಂಬ ಹೋರಾಟ ಕಳೆದ ಹಲವು ದಶಕಗಳಿಂದ ನಡೆಯುತ್ತಿದೆ.

<><><><>

ಯೋಜನೆ ಮತ್ತು ಸಾಂಖ್ಯಿಕ ಸಚಿವ ಡಿ.ಸುಧಾಕರ್ ಅವರು ಬೆಂಗಳೂರಿನ ಕಿಮ್ಸ್ ಆಸ್ಪತ್ರೆಯಲ್ಲಿ ಶ್ವಾಸಕೋಶ ಸಂಬಂಧಿ ತೊಂದರೆಗಳಿಗೆ ಚಿಕಿತ್ಸೆ ಪಡೆಯುತ್ತಿದ್ದಾರೆ. ಅವರು, ಚಿಕಿತ್ಸೆಗೆ ಸ್ಪಂದಿಸುತ್ತಿದ್ದಾರೆ ಎಂದು ಆಸ್ಪತ್ರೆಯ ವೈದ್ಯಕೀಯ ನಿರ್ದೇಶಕ ಡಾ.ಚೆನ್ನದುರೈ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಕಳೆದ ಕೆಲ ದಿನಗಳಿಂದ ಅನಾರೋಗ್ಯದ ಹಿನ್ನೆಲೆಯಲ್ಲಿ ಸಚಿವರನ್ನು ಆಸ್ಪತ್ರೆಗೆ ದಾಖಲಿಸಲಾಗಿತ್ತು. ನುರಿತ ವೈದ್ಯರ ತಂಡವು ಅವರ ಆರೋಗ್ಯದ ಮೇಲೆ ನಿಗಾ ಇರಿಸಿದೆ.

<><><><>

ಕನ್ನಡದ ವರನಟ ಡಾ.ರಾಜಕುಮಾರ್ ಅವರ ೯೭ನೇ ಜನ್ಮದಿನಾಚರಣೆಯನ್ನು ಇಂದು ರಾಜ್ಯಾದ್ಯಂತ ಆಚರಿಸಲಾಗುತ್ತಿದೆ. ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಕಂಠೀರವ ಸ್ಟುಡಿಯೋ ಆವರಣದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಮಾತನಾಡಿ, ಡಾ.ರಾಜ್‌ಕುಮಾರ್ ಅವರ ಸಾಧನೆಯನ್ನು ಸ್ಮರಿಸಿದರು. ಡಾ.ರಾಜ್ ಸಮಾಧಿ ಒಂದು ಪುಣ್ಯ ಭೂಮಿ ಎಂದು ಬಣ್ಣಿಸಿದರು.

<><><><>

ಅಭಿಮಾನಿಗಳಲ್ಲಿ ದೇವರನ್ನು ಕಂಡ ಡಾ. ರಾಜಕುಮಾರ ಅವರು, ಪ್ರತಿಯೊಬ್ಬ ಕನ್ನಡಿಗನ ಮನಸ್ಸಿನಲ್ಲಿ ಅಚ್ಚಳಿಯದೆ ಉಳಿಯಲು ಹಾಗೂ ಕಲಾ ಮಾಧ್ಯಮದ ಸಾಧ್ಯತೆಗಳನ್ನು ರೂಢಿಸಿಕೊಳ್ಳಲು ರಂಗಭೂಮಿ ಪ್ರಧಾನ ವೇದಿಕೆಯಾಗಿದೆ ಎಂದು ಹಿರಿಯ ಸಾಹಿತಿ, ನಾಟಕಕಾರ ಡಾ. ಡಿ.ಎಸ್. ಚೌಗಲೆ ತಿಳಿಸಿದ್ದಾರೆ. ಬೆಳಗಾವಿಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಗುಬ್ಬಿ ವೀರಣ್ಣನವರ ಗರಡಿಯಲ್ಲಿ ಮುತ್ತುರಾಜನಾಗಿ ಪಳಗಿದ ಅವರು, ಡಾ. ರಾಜ್‌ಕುಮಾರ್ ಆಗಿ ಬೆಳೆದ ಹಾದಿ ಸ್ಫೂರ್ತಿದಾಯಕ ಎಂದು ಅಭಿಪ್ರಾಯಪಟ್ಟಿದ್ದಾರೆ. ಬಳ್ಳಾರಿಯಲ್ಲಿ ರಾಜ್ ಪ್ರತಿಮೆಗೆ ಹೆಚ್ಚುವರಿ ಜಿಲ್ಲಾಧಿಕಾರಿ, ಮಹಮ್ಮದ್ ಝುಬೇರ್, ಸೇರಿದಂತೆ ಹಲವು ಗಣ್ಯರು ಪುಷ್ಪ ನಮನ ಸಲ್ಲಿಸಿದರು. ವರನಟ, ಪದ್ಮಭೂಷಣ ಡಾ.ರಾಜ್‌ಕುಮಾರ್ ಅವರ ೯೭ನೇ ಜನ್ಮ ದಿನಾಚರಣೆಯನ್ನು ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಸಂಭ್ರಮದಿಂದ ಆಚರಿಸಲಾಯಿತು. ರಾಜ್ ಕುಮಾರ್ ಜನ್ಮದಿನಾಚರಣೆ ಅಂಗವಾಗಿ ರಕ್ತದಾನ ಶಿಬಿರ ಹಮ್ಮಿಕೊಳ್ಳಲಾಗಿತ್ತು.

<><><>

ಬಳ್ಳಾರಿ ನಗರ ಮತ್ತು ಜಿಲ್ಲೆಯಲ್ಲಿ ಬೇಸಿಗೆ ಅವಧಿಯಲ್ಲಿ ಜನ, ಜಾನುವಾರುಗಳಿಗೆ ಕುಡಿಯುವ ನೀರಿನ ಸಮಸ್ಯೆ ಆಗದಂತೆ ಜಿಲ್ಲಾಡಳಿತ ಅಗತ್ಯ ಕ್ರಮ ಕೈಗೊಂಡಿದೆ ಎಂದು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್ ಕೆ. ತಿಳಿಸಿದ್ದಾರೆ. ಆಕಾಶವಾಣಿಯೊಂದಿಗೆ ಮಾತನಾಡಿದ ಅವರು, ಬಳ್ಳಾರಿ ನಗರ ಮತ್ತು ಗ್ರಾಮೀಣ ಪ್ರದೇಶದಲ್ಲಿ ತುಂಗಭದ್ರ ಬಲದಂಡೆ ಕಾಲುವೆ ಕುಡಿಯುವ ನೀರಿನ ಮೂಲವಾಗಿದೆ. ೧೫ ದಿನಗಳ ಕಾಲ ಕಾಲುವೆಗೆ ನೀರು ಬಿಟ್ಟಿರುವುದರಿಂದ ಕೆರೆಗಳನ್ನು ತುಂಬಿಸಿಕೊಳ್ಳಲಾಗಿದೆ. ಜಿಲ್ಲೆಯ ೭೨ ಕೆರೆಗಳಲ್ಲಿ ಹಾಲಿ ಶೇಕಡ ೫೦ ರಷ್ಟು ಕುಡಿಯುವ ನೀರಿನ ಸಂಗ್ರಹ ಇದೆ ಎಂದು ಸ್ಪಷ್ಟಪಡಿಸಿದ್ದಾರೆ.

ಧ್ವನಿ: ನಾಗೇಂದ್ರ ಪ್ರಸಾದ್ ಕೆ. (೧೯ ಸೆಕೆಂಡ್‌ಗಳು)

<><><>

ಬೆಂಗಳೂರು ನಗರದಾದ್ಯಂತ ಸಮರ್ಪಕವಾಗಿ ಕುಡಿಯುವ ನೀರನ್ನು ಸರಬರಾಜು ಮಾಡಲಾಗುತ್ತಿದ್ದು, ನೀರು ಪೂರೈಕೆಯಲ್ಲಿ ವ್ಯತ್ಯಯ ಉಂಟಾದರೆ ತಕ್ಷಣವೇ ಸ್ಪಂದಿಸಲು ಅಗತ್ಯ ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದು ಬೆಂಗಳೂರು ಜಲಮಂಡಳಿ ಅಧ್ಯಕ್ಷ ಡಾ.ರಾಮ್‌ಪ್ರಸಾತ್ ಮನೋಹರ್ ತಿಳಿಸಿದ್ದಾರೆ. ಕಳೆದ ಬೇಸಿಗೆಯಲ್ಲಿ ಕುಡಿಯುವ ನೀರಿನ ಕೊರತೆಯಿಂದ ತೊಂದರೆ ಅನುಭವಿಸಿದ್ದ ಕನಕಪುರ ರಸ್ತೆ ಭಾಗದ ಬನಗಿರಿ ನಗರ, ಭುವನೇಶ್ವರಿ ನಗರ ಸೇರಿದಂತೆ ಹಲವು ಪ್ರದೇಶಗಳಿಗೆ ಇಂದು ಖುದ್ದು ಭೇಟಿ ನೀಡಿದ ಅವರು, ಪ್ರಸ್ತುತ ನೀರಿನ ಸರಬರಾಜು ಕುರಿತು ಸ್ಥಳೀಯ ನಿವಾಸಿಗಳೊಂದಿಗೆ ಮುಕ್ತವಾಗಿ ಚರ್ಚಿಸಿ ಮಾಹಿತಿ ಪಡೆದುಕೊಂಡಿದ್ದಾರೆ.

<><><>

ಪ್ರಸಕ್ತ ಸಾಲಿನ ಮುಂಗಾರು ಹಂಗಾಮಿನಲ್ಲಿ ರಸಗೊಬ್ಬರಗಳ ವಿತರಣೆಯನ್ನು ಪಾರದರ್ಶಕಗೊಳಿಸಲು ಹಾಗೂ ದುರ್ಬಳಕೆ ತಡೆಯಲು ಕೃಷಿ ಇಲಾಖೆಯು ಹೊಸ ಮಾರ್ಗಸೂಚಿ ಹೊರಡಿಸಿದೆ. ಇನ್ಮುಂದೆ ರಸಗೊಬ್ಬರ ಖರೀದಿಸಲು ರೈತರಿಗೆ ಎಫ್.ಐ.ಡಿ. ಕಡ್ಡಾಯವಾಗಿರಲಿದೆ ಎಂದು ಕೋಲಾರ ಜಿಲ್ಲಾ ಜಂಟಿ ಕೃಷಿ ನಿರ್ದೇಶಕಿ ಜಾವೇದಾ ನಸೀಮಾ ಖಾನಂ ತಿಳಿಸಿದ್ದಾರೆ. ಮಣ್ಣಿನ ಫಲವತ್ತತೆ ಕಾಪಾಡುವ ದೃಷ್ಟಿಯಿಂದ ಪ್ರತಿ ಎಕರೆಗೆ ತಿಂಗಳಿಗೆ ಬೆಳೆ ಆಧಾರಿತ ಶಿಫಾರಸ್ಸಿನಂತೆ ಅಥವಾ ಗರಿಷ್ಠ ಒಂದು ಚೀಲ ಯೂರಿಯಾವನ್ನು ಮಾತ್ರ ವಿತರಿಸಲಾಗುತ್ತದೆ ಎಂದು ಹೇಳಿದ್ದಾರೆ. ಬೆಳೆ ಬೆಳೆಯುವ ಮುನ್ನ ಕಡ್ಡಾಯವಾಗಿ ಮಣ್ಣಿನ ಪರೀಕ್ಷೆ ಮಾಡಿಸಿ, ಅದರ ವರದಿಯ ಆಧಾರದ ಮೇಲೆ ಅಗತ್ಯವಿರುವಷ್ಟು ಮಾತ್ರ ಗೊಬ್ಬರ ಬಳಸಲು ರೈತರಿಗೆ ಸಲಹೆ ನೀಡಿದ್ದಾರೆ. ರಸಗೊಬ್ಬರ ಮಾರಾಟಗಾರರು ಯಾವುದೇ ಕಾರಣಕ್ಕೂ ಆಧಾರ್ ಪರಿಶೀಲನೆ ಇಲ್ಲದೆ ಗೊಬ್ಬರ ನೀಡಬಾರದು ಎಂದು ನಿರ್ದೇಶನ ನೀಡಿದ್ದಾರೆ.

<><><>

ದಾವಣಗೆರೆ ಜಿಲ್ಲೆಯನ್ನು ಎಚ್‌ಐವಿ ಮುಕ್ತವಾಗಿಸುವ ನಿಟ್ಟಿನಲ್ಲಿ ಆರೋಗ್ಯ ಇಲಾಖೆ ಹಾಗೂ ಸ್ವಯಂಸೇವಾ ಸಂಸ್ಥೆಗಳು ಸಮನ್ವಯದೊಂದಿಗೆ ಕೆಲಸ ಮಾಡಬೇಕು ಎಂದು ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ ಸೂಚಿಸಿದ್ದಾರೆ. 'ಮಿಷನ್ ಏಡ್ಸ್ ಸುರಕ್ಷಾ ಅಭಿಯಾನ'ದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ತಪಾಸಣೆ ಹಾಗೂ ಜಾಗೃತಿ ಕಾರ್ಯಕ್ರಮಗಳಿಗೆ ಹೆಚ್ಚಿನ ವೇಗ ನೀಡಬೇಕು ಎಂದು ತಿಳಿಸಿದ್ದಾರೆ. ಜಿಲ್ಲೆಯ ಎಲ್ಲಾ ಖಾಸಗಿ ಆಸ್ಪತ್ರೆ ಹಾಗೂ ಆರೋಗ್ಯ ಕೇಂದ್ರಗಳಲ್ಲಿ ಎಚ್‌ಐವಿ ತಪಾಸಣೆ ಕಡ್ಡಾಯಗೊಳಿಸಲಾಗಿದ್ದು, ಒಂದು ವೇಳೆ ಪಾಸಿಟಿವ್ ಪ್ರಕರಣಗಳು ಪತ್ತೆಯಾದಲ್ಲಿ, ಅಂತಹ ರೋಗಿಗಳಿಗೆ ವಿಳಂಬ ಮಾಡದೆ ಉಚಿತವಾಗಿ ಎಆರ್‌ಟಿ ಚಿಕಿತ್ಸೆ ಲಭ್ಯವಾಗುವಂತೆ ನೋಡಿಕೊಳ್ಳಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ.

<><><>

ಬೇಸಿಗೆ ರಜೆಯ ಹಿನ್ನೆಲೆಯಲ್ಲಿ ಪ್ರಯಾಣಿಕರ ಹೆಚ್ಚುವರಿ ದಟ್ಟಣೆ ನಿಯಂತ್ರಿಸಲು ನೈಋತ್ಯ ರೈಲ್ವೆಯು ಇದೇ ೧೭ ರಂದು ಬೆಂಗಳೂರಿನ ಕಂಟೋನ್ಮೆಂಟ್ ನಿಲ್ದಾಣದಿಂದ ಪಶ್ಚಿಮ ಬಂಗಾಳದ ಮಾಲ್ಡಾ ಟೌನ್'ಗೆ ಏಕಮುಖ ವಿಶೇಷ ಎಕ್ಸ್'ಪ್ರೆಸ್ ರೈಲನ್ನು ಓಡಿಸಲಿದೆ. ಈ ರೈಲಿನಲ್ಲಿ ಒಂದು ಎಸಿ ೧-ಟೈರ್ ಕಮ್ ಎಸಿ ೩-ಟೈರ್ ಬೋಗಿ, ಎರಡು ಎಸಿ ೩-ಟೈರ್ ಬೋಗಿಗಳು, ಒಂಬತ್ತು ಸ್ಲೀಪರ್ ಬೋಗಿಗಳು, ಎಂಟು ಸಾಮಾನ್ಯ ದ್ವಿತೀಯ ದರ್ಜೆ ಬೋಗಿಗಳು ಹಾಗೂ ಎರಡು ಲಗೇಜ್ ಕಮ್ ಬ್ರೇಕ್ ವ್ಯಾನ್ ಬೋಗಿಗಳು ಸೇರಿದಂತೆ ಒಟ್ಟು ೧೧ ಬೋಗಿಗಳು ಇರಲಿವೆ.

<><><>

ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿಂದು ಇಂದು ರಾಯಲ್ ಚಾಲೆಂಜರ್ಸ್ ಬೆಂಗಳೂರು ಹಾಗೂ ಗುಜರಾತ್ ಟೈಟಾನ್ಸ್ ನಡುವೆ ಐಪಿಎಲ್ ಟಿ-೨೦ ಪಂದ್ಯ ನಡೆಯಲಿದೆ. ಪಂದ್ಯ ಸಂಜೆ ೭.೩೦ಕ್ಕೆ ಆರಂಭವಾಗಲಿದೆ. ಈ ಆವೃತ್ತಿಯಲ್ಲಿ ಆರ್‌ಸಿಬಿ ಬೆಂಗಳೂರಿನಲ್ಲಿ ಆಡುವ ಕೊನೆಯ ಲೀಗ್ ಪಂದ್ಯವಾಗಿದೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>